# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 471 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.08.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಕಳೆದ 6-7 ತಿಂಗಳುಗಳಿಂದ ಇ-ಸ್ವತ್ತು ದಾಖಲೆಯನ್ನು ನೀಡುತ್ತಿಲ್ಲ ಎಂಬ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ಇ-ಸ್ವತ್ತು ದಾಖಲೆಯನ್ನು ನೀಡುತ್ತಿಲ್ಲ; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರನ್ವಯ ದಿನಾಂಕ: 01.12.2025 ರಂದು ಮಾನ್ಯ ಮುಖ್ಯ ಮಂತ್ರಿಗಳು, ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು ನಾಗರೀಕ ಸ್ನೇಹಿಯಾದ ಇ-ಸ್ವತ್ತು 2.0 ತಂತ್ರಾಂಶಕ್ಕೆ ಚಾಲನೆ ನೀಡಿರುತ್ತಾರೆ.<br><br>ಇ-ಸ್ವತ್ತು ಪ್ರಕ್ರಿಯೆ ಹಾಗೂ ತಂತ್ರಾಂಶವನ್ನು ಹೆಚ್ಚು ನಾಗರೀಕ ಸ್ನೇಹಿಯಾಗಿ ಅಭಿವೃದ್ಧಿಗೊಳಿಸುವುದು ಒಂದು ನಿರಂತರ ಪ್ರಕ್ರಿಯೆಯಾಗಿದ್ದು, ಇದನ್ನು ಆದ್ಯತೆಯ ಮೇಲೆ ಸರಿಪಡಿಸಲಾಗುತ್ತಿದ್ದು, ನಿಯಮಗಳನ್ವಯ ಸಲ್ಲಿಸಲಾದ ಆಸ್ತಿಗಳಿಗೆ ನಮೂನೆಗಳನ್ನು ವಿತರಿಸಲಾಗುತ್ತಿರುತ್ತದೆ.<br><br>ರಾಜ್ಯಾದ್ಯಂತ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಎ ಕೋರಿ ಒಟ್ಟು 184222 ಅರ್ಜಿಗಳು ಸ್ವೀಕೃತಗೊಂಡಿದ್ದು ಇವುಗಳ ಪೈಕಿ 153795 ಅರ್ಜಿಗಳು ಅನುಮೋದನೆಗೊಂಡಿರುತ್ತವೆ. ಉಳಿದ ಅರ್ಜಿಗಳು ಅನುಮೋದನೆ ಪ್ರಕ್ರಿಯೆ ಹಂತದಲ್ಲಿರುತ್ತವೆ. |
| (ಆ) | ಇ-ಸ್ವತ್ತು ದಾಖಲೆಗೆ ಅರ್ಜಿ ಸಲ್ಲಿಸಿದ ಸಾರ್ವಜನಿಕರಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಾಂತ್ರಿಕ ದೋಷದಿಂದಾಗಿ ಈ ಸೌಲಭ್ಯವನ್ನು ನೀಡಲು ಆಗುತ್ತಿಲ್ಲ ಎಂದು ತಿಳಿಸುತ್ತಿರುವುದು ನಿಜವೇ; | ಇ-ಸ್ವತ್ತು ಪ್ರಕ್ರಿಯೆ ಹಾಗೂ ತಂತ್ರಾಂಶವನ್ನು ಹೆಚ್ಚು ನಾಗರೀಕ ಸ್ನೇಹಿಯಾಗಿ ಅಭಿವೃದ್ಧಿಗೊಳಿಸುವುದು ಒಂದು ನಿರಂತರ ಪ್ರಕ್ರಿಯೆಯಾಗಿದ್ದು, ಇದನ್ನು ಆದ್ಯತೆಯ ಮೇಲೆ ಸರಿಪಡಿಸಲಾಗುತ್ತಿರುತ್ತದೆ.<br><br>ಇ-ಸ್ವತ್ತು ತಂತ್ರಾಂಶದ ನಮೂನೆ 11ಎ ಮತ್ತು 11ಬಿಗಳ ವರ್ಗೀಕರಣ ಪ್ರಕ್ರಿಯೆಯಲ್ಲಿನ ವಿವಿಧ ಮಾಡ್ಯುಲ್‌ಗಳನ್ನು ಅಭಿವೃದ್ಧಿಪಡಿಸಲಾಗಿದ್ದು, ಇವುಗಳಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲಾಗಿದ್ದು ಪ್ರಸ್ತುತ ತಂತ್ರಾಂಶವು ಸ್ಥಿರವಾಗಿ ಕಾರ್ಯನಿರ್ವಹಿಸುತ್ತಿದೆ.<br><br>ಕೆಲವೊಂದು ಅರ್ಜಿಗಳ ವಿಲೇವಾರಿಯಲ್ಲಿ ತಾಂತ್ರಿಕ ತೊಡಕುಗಳು ಕಂಡುಬರುತ್ತಿದ್ದು, ಅವುಗಳನ್ನು ಅರ್ಜಿವಾರು ಬಗೆಹರಿಸಲಾಗುತ್ತಿದೆ. |

| | | |
|---|---|---|
| (ಇ) | ದೀರ್ಘ ಕಾಲದವರೆಗೆ ಈ ಸೌಲಭ್ಯವನ್ನು ನೀಡದೆ ಹೋದರೆ ಸಾರ್ವಜನಿಕರಿಗೆ ಸಮಸ್ಯೆಯಾಗುವುದರ ಜೊತೆಗೆ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗುವುದಿಲ್ಲವೇ; | ಆಡಳಿತಾತ್ಮಕ ಮತ್ತು ತಾಂತ್ರಿಕ ಕ್ರಮಗಳನ್ನು ಶಿಫಾರಸ್ಸು ಮಾಡಲು ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. |
| (ಈ) | ತಂತ್ರಾಂಶದ ತಾಂತ್ರಿಕ ದೋಷವನ್ನು ಯಾವ ಕಾಲಮಿತಿಯಲ್ಲಿ ಸರಿಪಡಿಸಲಾಗುತ್ತದೆ; ಹಾಗೂ ತಂತ್ರಾಶವನ್ನು ಸರಿಪಡಿಸುವವರೆಗೆ ಆಸ್ತಿ ಮಾರಾಟಗಾರರಿಗೆ ನೀಡುವ ತಾತ್ಕಾಲಿಕ । ಮಾರ್ಗೋಪಾಯಗಳು ಯಾವುವು? | ಇ-ಸ್ವತ್ತು ಪ್ರಕ್ರಿಯೆ ಹಾಗೂ ತಂತ್ರಾಂಶವನ್ನು ಹೆಚ್ಚು ನಾಗರೀಕ ಸ್ನೇಹಿಯಾಗಿ ಅಭಿವೃದ್ಧಿಗೊಳಿಸುವುದು ಒಂದು ನಿರಂತರ ಪ್ರಕ್ರಿಯೆಯಾಗಿದ್ದು, ಇದನ್ನು ಆದ್ಯತೆಯ ಮೇಲೆ ಸರಿಪಡಿಸಲಾಗುತ್ತಿರುತ್ತದೆ. |

ಸಂಖ್ಯೆ: ಗ್ರಾಅಪ 789 ಗ್ರಾಪಂಅ 2026

(ಈಶ್ವರ ಬಿ. ಖಂಡ್ರೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.